ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಸಂಸ್ಕರಣಾ ಘಟಕಗಳು ಹಾಗೂ ಉಗ್ರಾಣಗಳು ಇಲ್ಲದಿರುವ ಕುರಿತು

ಡಾ|| ಜಯಮಾಲ ರಾಮಚಂದ್ರ(ನಾಮನಿರ್ದೇಶನ ಹೊಂದಿದವರು):-

554 (760) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರೈತರು ಬೆಳೆದ ಹಣ್ಣು, ಹೂವು, ತರಕಾರಿಗಳು ಮತ್ತು ಇತರೆ ಕೃಷಿ ಉತ್ಪನ್ನಗಳನ್ನು ಕೆಡದಂತೆ ಕಾಪಾಡಲು ಎಷ್ಟು ಸಂಸ್ಕರಣಾ ಘಟಕಗಳು ಹಾಗೂ ಉಗ್ರಾಣಗಳನ್ನು ಸರ್ಕಾರದ ವತಿಯಿಂದ ಸ್ಥಾಪಿಸಲಾಗಿದೆ ;

(ಆ) ಪ್ರಸ್ತುತ ಯಾವ ಯಾವ ಜಿಲ್ಲೆಗಳಲ್ಲಿ ರೈತರು ಅತಿ ಹೆಚ್ಚು ಹೂವು, ಹಣ್ಣು, ತರಕಾರಿ ಸೇರಿದಂತೆ ಕೃಷಿ ಉತ್ಪನ್ನಗಳನ್ನು ಬೆಳೆದು, ಕೆಡದಂತೆ ಕಾಪಾಡಲು ಸಂಸ್ಕರಣಾ ಕೋಲ್ಡ್ ಸ್ಟೋರೇಜ್ ಘಟಕ ಇಲ್ಲದೇ, ತಮ್ಮ ಬೆಳೆಗಳಿಗೆ ತಕ್ಕ ಬೆಲೆ ದೊರಕದೇ ನಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಂತಹ ಘಟಕಗಳಿಲ್ಲದ ಸ್ಥಳಗಳಲ್ಲಿ ಸಂಸ್ಕರಣಾ ಕೋಲ್ಡ್ ಸ್ಟೋರೇಜ್ ಘಟಕ ಹಾಗೂ ಉಗ್ರಾಣಗಳನ್ನು ಸ್ಥಾಪಿಸಲು ಸರ್ಕಾರದ ಕ್ರಮವೇನು ?